Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

22.01.2026 18.40 hrs

***************

ಮುಖ್ಯಾಂಶಗಳು

- ವಿಧಾನಸಭೆಯಲ್ಲಿ ಆಡಳಿತ ಹಾಗೂ ಪ್ರತಿಪಕ್ಷಗಳ ಸದಸ್ಯರ ನಡುವೆ ಕಾವೇರಿದ ಮಾತುಕತೆ; ಗದ್ದಲದ ವಾತಾವರಣ
- ಮನ್ರೇಗಾ ಕಾಯ್ದೆ ಮರು ಸ್ಥಾಪನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹ
- ಅನುದಾನ ದುರ್ಬಳಕೆ ತಡೆಗಟ್ಟಿ ಹೆಚ್ಚಿನ ಉದ್ಯೋಗ ಸೃಷ್ಟಿಸಲು ವಿಬಿ-ಜಿ ರಾಮ್ ಜಿ ಯೋಜನೆ - ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸ್ಪಷ್ಟನೆ
- ನಾಗರಕೋಯ್ಲ್ - ಮಂಗಳೂರು ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲು ಸೇವೆಗೆ ನಾಳೆ ಪ್ರಧಾನಿ ಚಾಲನೆ
- ಲಕ್ಕುಂಡಿಯಲ್ಲಿ ಮುಂದುವರಿದ ಉತ್ಖನನ ಕಾರ್ಯ; ಪ್ರಾಚ್ಯ ಅವಶೇಷ ಪತ್ತೆ

***************

ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಸದನದಲ್ಲಿಂದು ಸದಸ್ಯರಿಗೆ ಸಂವಿಧಾನ ಪೀಠಿಕೆ ಬೋಧಿಸಿದರು.

ರಾಜ್ಯಪಾಲರ ಭಾಷಣದ ನಂತರ ಸದನ ಮತ್ತೆ ಸೇರಿದ ಸಂದರ್ಭದಲ್ಲಿ ಕಾನೂನು ಹಾಗೂ ಸಂಸದೀಯ ಖಾತೆ ಸಚಿವ ಎಚ್.ಕೆ. ಪಾಟೀಲ್, ರಾಜ್ಯಪಾಲರ ಕುರಿತಂತೆ ಮಾಡಿದ ಆಕ್ಷೇಪದ ಹಿನ್ನೆಲೆಯಲ್ಲಿ ಪ್ರತಿಪಕ್ಷದ ಸದಸ್ಯರು ವಿರೋಧ ವ್ಯಕ್ತಪಡಿಸಿದಾಗ ಸದನದಲ್ಲಿ ಕೆಲ ಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು.

ಪ್ರತಿಪಕ್ಷದ ನಾಯಕ ಆರ್. ಅಶೋಕ ತಮಗೂ ಮಾತನಾಡಲು ಅವಕಾಶ ನೀಡಬೇಕು ಎಂದು ಸಭಾಧ್ಯಕ್ಷರಲ್ಲಿ ಮನವಿ ಮಾಡಿದರು. ರಾಜ್ಯಪಾಲರು ಭಾಷಣ ಮಾಡಿ ನಿರ್ಗಮಿಸುವಾಗ ಅವರಿಗೆ ಅಡ್ಡಿಪಡಿಸಿದ ಸದಸ್ಯರ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ಸದಸ್ಯ ಸುನಿಲ್ ಕುಮಾರ್, ಪ್ರತಿಪಕ್ಷದ ನಾಯಕರ ಮಾತನ್ನು ಬೆಂಬಲಿಸಿ, ರಾಜ್ಯಪಾಲರಿಗೆ ಅವಮಾನ ಮಾಡಿದವರ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಪಡಿಸಿದರು.

ಸಭಾಧ್ಯಕ್ಷ ಯು.ಟಿ. ಖಾದರ್, ರಾಜ್ಯಪಾಲರು ಉಭಯ ಸದನಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಭಾಷಣ ಮಂಡಿಸಿದ ಹಲವಾರು ಉದಾಹರಣೆಗಳಿವೆ ಎಂದರು. ಕಾನೂನು ಹಾಗೂ ಸಂಸದೀಯ ಖಾತೆ ಸಚಿವ ಎಚ್.ಕೆ. ಪಾಟೀಲ್, ರಾಜ್ಯಪಾಲರು ಭಾಷಣ ಮಾಡುವಾಗ ಪ್ರತಿಪಕ್ಷದ ಕಡೆಯಿಂದಾಗಲಿ, ಆಡಳಿತ ಪಕ್ಷದ ಕಡೆಯಿಂದಾಗಲಿ ಅವಮಾನವಾಗಲಿಲ್ಲ ಎಂದರು.

ಆಡಳಿತ ಹಾಗೂ ಪ್ರತಿಪಕ್ಷದ ಸದಸ್ಯರ ವಾದ ಆಲಿಸಿದ ಸಭಾಧ್ಯಕ್ಷ ಯು.ಟಿ. ಖಾದರ್, ಈ ಕುರಿತು ನಾಳೆ ರೂಲಿಂಗ್ ನೀಡುವುದಾಗಿ ಹೇಳಿದರು.

***************

ಇತ್ತೀಚೆಗೆ ನಿಧನ ಹೊಂದಿದ ಹಿರಿಯ ಮುತ್ಸದ್ದಿ ಭೀಮಣ್ಣ ಖಂಡ್ರೆ, ವಿಧಾನಸಭಾ ಸದಸ್ಯ ಕೆ. ಲಕ್ಕಣ್ಣ ಹಾಗೂ ಪರಿಸರ ವಿಜ್ಞಾನಿ ಪ್ರೊಫೆಸರ್ ಮಾಧವ್ ಗಾಡ್ಗೀಳ್ ಅವರ ನೆನಪಿಗೆ ವಿಧಾನಸಭೆ ಇಂದು ಸಂತಾಪ ವ್ಯಕ್ತಪಡಿಸಿತು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಈ ಮೂವರು ಗಣ್ಯರು ನಾಡಿಗೆ ಸಲ್ಲಿಸಿದ ಸೇವೆಯನ್ನು ಶ್ಲಾಘಿಸಿದರು. ಗಣ್ಯರ ನಿಧನದಿಂದ ನಾಡಿಗೆ ತುಂಬಲಾರದ ನಷ್ಟವಾಗಿದೆ ಎಂದರು.

ಪ್ರತಿಪಕ್ಷ ನಾಯಕ ಆರ್.ಅಶೋಕ್, ಸಚಿವರಾದ ಕೆ.ಜೆ.ಜಾರ್ಜ್, ಕೆ.ಎಚ್.ಮುನಿಯಪ್ಪ, ಶರಣ ಪ್ರಕಾಶ್ ಪಾಟೀಲ್ ಸದಸ್ಯರಾದ ಜಿ.ಟಿ.ದೇವೇಗೌಡ,  ಬಿ.ವೈ.ವಿಜಯೇಂದ್ರ,ಎಂ.ಟಿ.ಕೃಷ್ಣಪ್ಪ, ಶರಣು ಸಲಗರ್, ಬಿ.ಆರ್. ಪಾಟೀಲ್, ಅಲ್ಲಮ ಪ್ರಭು ಪಾಟೀಲ್, ಶ್ರೀನಿವಾಸ, ಅಜಯ್ ಧರ್ಮಸಿಂಗ್ ಅವರು ಭೀಮಣ್ಣ ಖಂಡ್ರೆ, ಕೆ.ಲಕ್ಕಣ್ಣ ಹಾಗೂ ಪ್ರೊ.ಮಾಧವ ಗಾಡ್ಗೀಳ್ ಅವರು ನಾಡಿಗೆ ಸಲ್ಲಿಸಿದ ಸೇವೆಯನ್ನು ಶ್ಲಾಘಿಸಿ ಅವರ ನಿಧನಕ್ಕೆ ಸಂತಾಪ ಸೂಚಿಸಿದರು.

ಸದಸ್ಯರಾದ ಡಾ. ಶೈಲೇಂದ್ರ ಬೆಲ್ದಾಳೆ ಹಾಗೂ ಪ್ರಭು ಪಾಟೀಲ್ ನಾಡಿನ ಅಭಿವೃದ್ಧಿಗೆ ಅಪಾರ ಸೇವೆ ಸಲ್ಲಿಸಿದ ಭೀಮಣ್ಣ ಖಂಡ್ರೆ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ಪ್ರಕಟಿಸಬೇಕು ಎಂದು ಆಗ್ರಹಪಡಿಸಿದರು.

ಅಗಲಿದ ಹಿರಿಯರ ಗೌರವಾರ್ಥ ಸದನ ಒಂದು ನಿಮಿಷ ಮೌನ ಆಚರಿಸಿ ಗೌರವ ಸಲ್ಲಿಸಿತು. ಬಳಿಕ ಕಲಾಪವನ್ನು ನಾಳೆಗೆ ಮುಂದೂಡಲಾಯಿತು.

***************

ಕೇಂದ್ರ ಸರ್ಕಾರ ತಂದಿರುವ ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆಗೆ ತಮ್ಮ ಸರ್ಕಾರದ ತೀವ್ರ ವಿರೋಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಲಿದ್ದಾರೆ.

ಹೊಸ ಕಾಯ್ದೆಯಲ್ಲಿ ವರ್ಷಪೂರ್ತಿ ಕೆಲಸದ ಭರವಸೆ ಇಲ್ಲ, ಹೀಗಾಗಿ ಹೊಸ ಕಾಯ್ದೆ ರದ್ದಾಗಬೇಕು ಹಾಗು ಮನ್ರೇಗಾ ಕಾಯ್ದೆಯನ್ನು ಮರುಸ್ಥಾಪಿಸಬೇಕು ಎನ್ನುವುದು ರಾಜ್ಯ ಸರ್ಕಾರದ ನಿಲುವಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.

***************

ಜಂಟಿ ಅಧಿವೇಶನದ ನಂತರ ವಿಧಾನಪರಿಷತ್ ಸಮಾವೇಶಗೊಂಡಾಗ ಆಡಳಿತ ಪಕ್ಷದ ಸದಸ್ಯರು, ರಾಜ್ಯಪಾಲರು ಸದನದಲ್ಲಿ ಸಚಿವ ಸಂಪುಟ ಸಭೆ ತಯಾರಿಸಿದ ಭಾಷಣವನ್ನು ಓದದೆ ತಾವೇ ತಯಾರಿಸಿದ ಭಾಷಣವನ್ನು ಓದಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಸಭಾಪತಿ ಬಸವರಾಜ ಹೊರಟ್ಟಿ ಸಂತಾಪ ಸೂಚನೆ ನಂತರ ಈ ವಿಚಾರವಾಗಿ ಚರ್ಚೆ ಮಾಡಬಹುದು ಎಂದು ಹೇಳಿದರು. ಬಳಿಕ ಇತ್ತೀಚೆಗೆ ಅಗಲಿದ ಮಾಜಿ ಸಚಿವ ಡಾ.ಭೀಮಣ್ಣ ಖಂಡ್ರೆ ಸೇರಿದಂತೆ ಗಣ್ಯರಿಗೆ ಸಂತಾಪ ಸೂಚನಾ ನಿರ್ಣಯ ಮಂಡಿಸಲಾಯಿತು. ಹಲವು ಸದಸ್ಯರು ಅಗಲಿದ ಗಣ್ಯರ ಕೊಡುಗೆಗಳನ್ನು ಸ್ಮರಿಸಿದರು.

ಸದಸ್ಯ ಎಚ್.ವಿಶ್ವನಾಥ್, ಗಡಿ ಭಾಗದಲ್ಲಿ ಕನ್ನಡ ಭಾಷೆಗೆ ಹೆಚ್ಚು ಪ್ರಾಮುಖ್ಯತೆ ನೀಡಿ ಕನ್ನಡಕ್ಕಾಗಿ ಶ್ರಮಿಸಿದವರು ಭೀಮಣ್ಣ ಖಂಡ್ರೆ. ಇಂದು ಅವರು ನಮ್ಮೊಂದಿಗೆ ಇಲ್ಲದಿದ್ದರೂ ಅವರು ಮಾಡಿದ ಉತ್ತಮ ಕೆಲಸಗಳಲ್ಲಿ ಅವರು ಎಂದಿಗೂ ಜೀವಂತವಾಗಿದ್ದಾರೆ ಎಂದು ಸ್ಮರಿಸಿದರು.

ಹಿರಿಯ ನಾಯಕ ಬಿ.ಕೆ ಹರಿಪ್ರಸಾದ್ ಮಾತನಾಡಿ ಡಾ.ಬೀಮಣ್ಣ ಖಂಡ್ರೆ ಸಾಮಾನ್ಯ ಜನರ ಮೇಲೆ ಹೆಚ್ಚಿನ ಕಾಳಜಿ ವಹಿಸಿದ್ದರು. ರಾಜಕಾರಣದಲ್ಲಿ ಭೀಮಣ್ಣ ಅವರು ಮೂರು ತಲೆಮಾರುಗಳನ್ನು ನೋಡಿದ್ದರು. ಸೈದ್ಧಾಂತಿಕವಾಗಿ ಅವರು ಯಾವುದೇ ವಿಚಾರಗಳಲ್ಲಿ ರಾಜಿ ಆಗದೇ ಸಾಮಾಜಿಕ ನ್ಯಾಯದ ಪರವಾಗಿಯೇ ಮಾತನಾಡುತ್ತಿದ್ದರು. ಅವರ ಅಗಲಿಕೆ ಕಾಂಗ್ರೆಸ್ ಪಕ್ಷಕ್ಕೆ ಮಾತ್ರವಲ್ಲದೆ ಇಡೀ ರಾಷ್ಟ್ರಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಸಂತಾಪ ಸೂಚಿಸಿದರು.

ಅಗಲಿದ ಹಿರಿಯರ ಗೌರವಾರ್ಥ ಸದನ ಒಂದು ನಿಮಿಷ ಮೌನವಾಚರಿಸಿ, ಗೌರವ ಸಲ್ಲಿಸಿತು. ಬಳಿಕ ಕಲಾಪವನ್ನು ನಾಳೆಗೆ ಮುಂದೂಡಲಾಯಿತು.

***************

ಭ್ರಷ್ಟಾಚಾರ ನಿವಾರಿಸಿ ಗ್ರಾಮ ಪಂಚಾಯಿತಿಗಳಿಗೆ ನಿರ್ಣಯ ಪ್ರಕ್ರಿಯೆಯಲ್ಲಿ ಹೆಚ್ಚಿನ ಅಧಿಕಾರ ನೀಡಿ, ಕಾರ್ಮಿಕರಿಗೆ ನೂರು ದಿನಗಳ ಬದಲು ೧೨೫ ದಿನಗಳ ಉದ್ಯೋಗ ಸೃಷ್ಟಿಸಲು ಕೇಂದ್ರ ಸರ್ಕಾರ ವಿಕಸಿತ ಭಾರತ - ಜಿ ರಾಮ್ ಜಿ ಯೋಜನೆಯನ್ನು ಜಾರಿಗೆ ತಂದಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ನವೀಕೃತ ಉದ್ಯೋಗ ಖಾತರಿ ಯೋಜನೆಯಡಿ ಉದ್ಯೋಗ ಸೃಷ್ಟಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ, ತಂತ್ರಜ್ಞಾನದ ಬಳಕೆಯಾಗುತ್ತಿದೆ ಹಾಗೂ ಕೃಷಿ ಚಟುವಟಿಕೆ ನಡೆಯುವ ಸಮಯದಲ್ಲಿ ಕಾರ್ಮಿಕರನ್ನು ಒದಗಿಸುವ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಕಾಂಗ್ರೆಸ್ ಸರ್ಕಾರ ಈ ಯೋಜನೆಯ ಕುರಿತು ಹುಸಿ ನುಡಿಯುತ್ತಿದೆ, ಭ್ರಷ್ಟಾಚಾರ ಮಾಡುವ ಉದ್ದೇಶದಿಂದ ಅವರು ಹೊಸ ಯೋಜನೆಗೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಯಾದಗಿರಿ, ಕಲಬುರಗಿ ಹಾಗೂ ಇತರೆಡೆ ಎಂಜಿ ನರೇಗಾ ದುರ್ಬಳಕೆಯ ಪ್ರಕರಣಗಳು ಬೆಳಕಿಗೆ ಬಂದಿವೆ. ಹೊಸ ವ್ಯವಸ್ಥೆಯಲ್ಲಿ ಇದಕ್ಕೆ ವಿರಾಮ ನೀಡಲಾಗುವುದು ಎಂದು ಭರವಸೆ ನೀಡಿದರು.

ಯುಪಿಎ ಸರ್ಕಾರ ಉದ್ಯೋಗ ಖಾತ್ರಿ ಯೋಜನೆಯಡಿ ತನ್ನ ಹತ್ತು ವರ್ಷಗಳ ಅವಧಿಯಲ್ಲಿ ೮ ಸಾವಿರದ ೭೫೪ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದ್ದರೆ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಹತ್ತು ವರ್ಷಗಳಲ್ಲಿ ಕರ್ನಾಟಕಕ್ಕೆ ೪೮ ಸಾವಿರದ ೫೫೪ ಕೋಟಿ ರೂಪಾಯಿಗೂ ಹೆಚ್ಚು ಅನುದಾನವನ್ನು ಬಿಡುಗಡೆ ಮಾಡಿದೆ.

ರಾಷ್ಟ್ರೀಯ ಮಟ್ಟದಲ್ಲಿ ಯುಪಿಎ ಸರ್ಕಾರ ೨ ಲಕ್ಷದ ೧೩ ಸಾವಿರ ಕೋಟಿ ರೂಪಾಯಿ ಅನುದಾನ ಗೊತ್ತುಪಡಿಸಿದ್ದರೆ, ಎನ್‌ಡಿಎ ಸರ್ಕಾರ ಈ ಯೋಜನೆಗೆ ೮ ಲಕ್ಷ ೪೮ ಸಾವಿರ ಕೋಟಿ ರೂಪಾಯಿ ಅನುದಾನ ಪ್ರಕಟಿಸಿದೆ ಎಂದು ಸಚಿವರು ತಿಳಿಸಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ವಿಧಾನಮಂಡಲದಲ್ಲಿನ ಪಕ್ಷದ ನಾಯಕರಾದ ಆರ್. ಅಶೋಕ, ಛಲವಾದಿ ನಾರಾಯಣಸ್ವಾಮಿ ಉಪಸ್ಥಿತರಿದ್ದರು.

***************

ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿರುವ 'ಆರ್ಟ್ ಪಾರ್ಕ್'ನ ಕಾರ್ಯಕ್ರಮ ವ್ಯವಸ್ಥಾಪಕ ಹರೀಶ ನಲವಡೆ ಅವರು ಕೃತಕಬುದ್ಧಿಮತ್ತೆ ಮಾದರಿ ಮೂಲಕ ಪ್ರಗತಿ ಹೊಂದುತ್ತಿರುವ ತಮ್ಮ ಸಂಸ್ಥೆಯ ನಾವೀನ್ಯತೆ ಹಾಗೂ ಯಶೋಗಾಥೆಯನ್ನು ವಿವರಿಸಿದ್ದಾರೆ.

"ಹವಾಮಾನ ವೈಪರೀತ್ಯ ಜನರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ. ಇದರಿಂದ ಪರೋಕ್ಷವಾಗಿ ಜೀವನೋಪಾಯದ ಗುಣಮಟ್ಟ ಕ್ಷೀಣಿಸುತ್ತಿದೆ. ಈ ಸಮಸ್ಯೆಗೆ ಪರಿಹಾರವಾಗಿ ಕೃತಕ ಬುದ್ಧಿಮತ್ತೆ ಮಾದರಿ ಮೂಲಕ ಹವಾಮಾನ ಅಪಾಯದ ಮುನ್ಸೂಚನೆ ನೀಡುವ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗಿದೆ. ಇದನ್ನು ಸಾರ್ವಜನಿಕ ಸಂಸ್ಥೆಗಳಲ್ಲಿ ಅಳವಡಿಸುವ ಯೋಜನೆ ಇದೆ ಎಂದು ಅವರು ತಿಳಿಸಿದ್ದಾರೆ.

*********ಧ್ವನಿ, ಹರೀಶ ನಲವಡೆ ********* (೪೦ ಸೆಕೆಂಡ್ಸ್)

***************

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ಕೇರಳಕ್ಕೆ ಭೇಟಿ ನೀಡಲಿದ್ದು, ತಿರುವನಂತಪುರಂನಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಿಲಾನ್ಯಾಸ ಹಾಗೂ ಉದ್ಘಾಟನೆ ನೆರವೇರಿಸಲಿದ್ದಾರೆ.

ನಾಗರಕೋಯ್ಲ್ - ಮಂಗಳೂರು ಅಮೃತ್ ಭಾರತ್ ಎಕ್ಸ್‌ಪ್ರೆಸ್ ಸೇರಿದಂತೆ ನಾಲ್ಕು ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ಹಸಿರು ನಿಶಾನೆ ತೋರಿಸಲಿದ್ದಾರೆ.

ಈ ಹೊಸ ರೈಲುಗಳ ಸೇವೆ ಕರ್ನಾಟಕ ಸೇರಿದಂತೆ ಕೇರಳ, ತಮಿಳುನಾಡು, ತೆಲಂಗಾಣ ಮತ್ತು ಆಂಧ್ರಪ್ರದೇಶ ರಾಜ್ಯಗಳ ಪ್ರಾದೇಶಿಕ ಸಂಪರ್ಕ ಉತ್ತಮಪಡಿಸಲಿದೆ.

***************

ಗದಗ ಜಿಲ್ಲೆಯ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯ ಇಂದು ಏಳನೇಯ ದಿನಕ್ಕೆ ಕಾಲಿಟ್ಟಿದೆ.

ಲಕ್ಕುಂಡಿ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯದಲ್ಲಿ ೪೦ ಕಾರ್ಮಿಕರು ನಿರತರಾಗಿದ್ದಾರೆ. ಇಂದಿನ ಉತ್ಖನನ ಕಾರ್ಯದಲ್ಲಿ ನಾಗ ದೇವತಾ ಶಿಲಾಕೃತಿ, ಮೂಳೆ ತುಂಡುಗಳು, ಒಡೆದ ಮಣ್ಣಿನ ಮಡಕೆ, ಟೆರ್ರಾಕೋಟಾದ ವೃತ್ತಾಕಾರದ ಮಣ್ಣಿನ ಬಿಲ್ಲೆ ಮತ್ತು ಕೆಂಪುಮಣಿ ದೊರೆತಿವೆ ಎಂದು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***************

ಮಂಡ್ಯ- ಯುವಜನರು ತಮ್ಮ ಕನಸಿನ ಉದ್ಯೋಗವನ್ನು ಪಡೆಯಲು ಗುರಿ ನಿಗದಿಪಡಿಸಿಕೊಂಡು ಕಾರ್ಯಮಗ್ನರಾಗಬೇಕು ಎಂದು ರಾಷ್ಟ್ರೀಯ ಕಾರ್ಮಿಕ ಶಿಕ್ಷಣ ಮತ್ತು ಅಭಿವೃದ್ಧಿ ಮಂಡಳಿಯ ಶಿಕ್ಷಣಾಧಿಕಾರಿ ಎ. ಸತೀಶ್‍ಕುಮಾರ್ ತಿಳಿಸಿದ್ದಾರೆ.

ರಾಷ್ಟ್ರೀಯ ಕಾರ್ಮಿಕ ಶಿಕ್ಷಣ ಮತ್ತು ಅಭಿವೃದ್ಧಿ ಮಂಡಳಿ, ಪರಿಸರ ರೂರಲ್ ಡವೆಲಪ್‍ಮೆಂಟ್ ಸೊಸೈಟಿ, ಬಾಲಕಿಯರ ಪದವಿಪೂರ್ವ ಕಾಲೇಜು ವತಿಯಿಂದ ನಡೆದ ವೃತ್ತಿ ಮಾರ್ಗದರ್ಶನ ಮತ್ತು ಉದ್ಯೋಗ ಮಾರುಕಟ್ಟೆ ದೃಷ್ಟಿಕೋನ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಉದ್ಯೋಗವನ್ನು ಪಡೆಯಲು ಪರಿಣಾಮಕಾರಿ ಸಂವಹನ ಕೌಶಲ್ಯಗಳನ್ನು ಹೊಂದುವುದು ಅವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಮಹತ್ವದ ನಿರ್ಣಯಗಳನ್ನು ಪೋಷಕರು ಮಕ್ಕಳ ಮೂಲಕ ಪಡೆದುಕೊಳ್ಳಬೇಕು ಎಂದರು.

***************

ಮುಂದಿನ ತಿಂಗಳು ೧೩ರಿಂದ ಮೂರು ದಿನಗಳ ಕಾಲ ನಡೆಯಲಿರುವ ವಿಶ್ವವಿಖ್ಯಾತ ಹಂಪಿ ಉತ್ಸವವನ್ನು ಯಶಸ್ವಿಯಾಗಿ ಆಯೋಜಿಸಲು ಅಧಿಕಾರಿಗಳು ತಮಗೆ ವಹಿಸಿದ ಜವಾಬ್ದಾರಿಗಳನ್ನು ಯಾವುದೇ ಲೋಪದೋಷವಿಲ್ಲದೆ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಹಂಪಿ ಉತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಉತ್ಸವ ಸಿದ್ಧತೆಗಳಿಗಾಗಿ ಈಗಾಗಲೇ ೨೧ ಉಪ ಸಮಿತಿಗಳನ್ನು ರಚಿಸಲಾಗಿದೆ ಎಂದು ಅವರು ಈ ಸಂದರ್ಭದಲ್ಲಿ ತಿಳಿಸಿದರು.

*******ಮುಕ್ತಾಯ*******